ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005

ಸಂಖ್ಯೆ:ಎಸಿ7(ಎ)/456/2016-17

ದಿನಾಂಕ: 01.12.2021

## ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕ ಪದವಿಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಮಾಹಿತಿಯನ್ನು ಸಮಗ್ರ ವಿಶ್ವವಿದ್ಯಾನಿಲಯ **"UUCMS"** ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ನಿರ್ದೇಶನ.
2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 29.11.2021.

******

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಉಲ್ಲೇಖಿತ (2) ರಲ್ಲಿ – **2021-22ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಪಡೆದಿರುವ ಸ್ನಾತಕ ಪದವಿ ವಿದ್ಯಾರ್ಥಿಗಳ ಮಾಹಿತಿಯನ್ನು UUCMS ತಂತ್ರಾಂಶದಲ್ಲಿ ಕಡ್ಡಾಯವಾಗಿ ದಿನಾಂಕ: 30.11.2021ರೊಳಗಾಗಿ ನಮೂದಿಸಬೇಕೆಂದು ಸೂಚಿಸಲಾಗಿತ್ತು.**

ಆದರೆ, ಕೇವಲ ಕೆಲವೇ ಕಾಲೇಜುಗಳು ಮಾತ್ರ **UUCMS** ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಭರ್ತಿ ಮಾಡಲಾಗಿದೆ ಎಂದು ಸರ್ಕಾರದಿಂದ ಮಾಹಿತಿ ನೀಡಲಾಗಿರುತ್ತದೆ. ಈ ಕಾರಣದಿಂದಾಗಿ ಸರ್ಕಾರದಿಂದ ಮತ್ತೆ ದಿನಾಂಕ: **02.12.2021** ರವರೆಗೆ ವಿದ್ಯಾರ್ಥಿಗಳ ಮಾಹಿತಿಯನ್ನು ಭರ್ತಿ ಮಾಡಲು **ಕಡೆಯದಾಗಿ ಅವಕಾಶ ನೀಡಿರುವುದರಿಂದ ಕೂಡಲೇ ವಿದ್ಯಾರ್ಥಿಗಳ ಮಾಹಿತಿಯನ್ನು ಭರ್ತಿ ಮಾಡಬೇಕೆಂದು ತಿಳಿಸಲಾಗಿದೆ.**

ಏನಾದರೂ ತಾಂತ್ರಿಕ ದೋಷ ಅಥವಾ ಇನ್ನಾವುದೇ ಮಹಿತಿ ಪಡೆಯಲು ಈ ಕೆಳಕಂಡ ಅಧಿಕಾರಿ/ತಾಂತ್ರಿಕ ಸಿಬ್ಬಂದಿಯವರನ್ನು ಸಂಪರ್ಕಿಸುವುದು.

| Name | Role | Mobile Numbers |
|---|---|---|
| Prof. N.K.Lokanath | Director ( I/C) CDC. | 9449806412<br>0821-2419700/306 |
| Dr. H S Nagendraswamy | Nodal Officer | 9480476830,<br>7338615595 |
| Mr. Prabhuprasad | Technical Staff | 9845314450 |
| Mr. Govindaraju | Technical Staff | 9886947888 |

ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಜಾರಿಗೊಂಡಿರುವ ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಮಹಾವಿದ್ಯಾಲಯಗಳ ನಿರ್ವಹಣೆ – **UUCMS** ತಂತ್ರಾಂಶದಲ್ಲಿ ದಾಖಲಾಗುವ ಪ್ರತಿ ವಿದ್ಯಾರ್ಥಿಯ ಸಂಪೂರ್ಣ ಮಾಹಿತಿಯು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಇತರೆ ಪ್ರಮುಖ ಇಲಾಖೆಗಳಿಂದ ವಿದ್ಯಾರ್ಥಿಗಳ ನೀಡಲಾಗುವ ವಿದ್ಯಾರ್ಥಿವೇತನ/ಶಿಷ್ಯವೇತನಗಳ **SSP** ಪೋರ್ಟಲ್‌ಗೆ ನೇರ ಸಂಪರ್ಕ ಹೊಂದಿದ್ದು, ತಮ್ಮ ತಮ್ಮ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕೆ ತೊಂದರೆಯುಂಟಾದಲ್ಲಿ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳೇ ನೇರ **ಹೊಣೆಗಾರರಾಗಿರುತ್ತಾರೆಂದು** ಈ ಮೂಲಕ ಸ್ಪಷ್ಟಪಡಿಸಲಾಗಿದೆ.

1/12/2021

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು.

ಗೆ,

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪು.ತಿ.ನೋ

Admissions Mahadevappa 1/12/21 1/12/21.